## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 614 (691) |
| ಸದಸ್ಯರ ಹೆಸರು | : | ಶ್ರೀ. ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.09.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಅನುದಾನಿತ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ ವಿದ್ಯಾರ್ಥಿನಿಯರಿಗೆ ವಾರ್ಷಿಕ ಪರೀಕ್ಷಾ ಶುಲ್ಕವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನುದಾನಿತ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಇತರೆ ಸಾಮಾನ್ಯ ವರ್ಗಕ್ಕೆ ಸೇರಿದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿನಿಯರಿಂದ ಪರೀಕ್ಷಾ ಶುಲ್ಕವನ್ನು ಪಡೆಯಲಾಗುತ್ತಿದೆ. |
| ಆ | ರಾಜ್ಯ ಸರ್ಕಾರಿ ಪ್ರೌಢಶಾಲೆಗಳಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿನಿಯರಿಗೆ ವಾರ್ಷಿಕ ಪರೀಕ್ಷಾ ಶುಲ್ಕದಿಂದ ವಿನಾಯಿತಿಯನ್ನು ನೀಡಲಾಗಿದ್ದು, ಅನುದಾನಿತ ಪ್ರೌಢಶಾಲೆಗಳಲ್ಲಿನ ವಿದ್ಯಾರ್ಥಿನಿಯರಿಗೆ ಪರೀಕ್ಷಾ ಶುಲ್ಕವನ್ನು ಪಡೆಯುತ್ತಿರುವುದನ್ನು ರದ್ದುಗೊಳಿಸಿ ಎಲ್ಲಾ ಶಾಲೆಯ ವಿದ್ಯಾರ್ಥಿನಿಯರಿಗೆ ಸಮಾನವಾದ ರೀತಿಯಲ್ಲಿ ಶುಲ್ಕದಿಂದ ವಿನಾಯಿತಿಯನ್ನು ಸರ್ಕಾರ ಯಾವ ಸಾಲಿನಿಂದ ಜಾರಿ ಮಾಡಲಿದೆ? | ರಾಜ್ಯದ ಸರ್ಕಾರಿ, ಅನುದಾನಿತ ಅನುದಾನರಹಿತ ಶಾಲೆಗಳಲ್ಲಿ ಈ ಶುಲ್ಕದಿಂದ ಶಾಲೆಗಳಲ್ಲಿ ಎಸ್.ಎಸ್ .ಎಲ್.ಸಿ. ಪರೀಕ್ಷೆ ಬರೆಯುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಲ್ಲಾ ವಿದ್ಯಾರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳು ಹಾಗೂ ಸರ್ಕಾರಿ ಆದೇಶ ಸಂಖ್ಯೆ:ಇಡಿ 119 ಯೋಯೋಕಾ 2000 ದಿನಾಂಕ:16.07.2001 ರನ್ವಯ ಸರ್ಕಾರಿ ಪ್ರೌಢಶಾಲೆಗಳಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡಿ ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗುವ ಇತರೆ ವರ್ಗದ ಎಲ್ಲಾ ಹೆಣ್ಣು ಮಕ್ಕಳಿಗೆ ಎಸ್.ಎಸ್.ಎಲ್.ಸಿ. ಪರೀಕ್ಷಾ ಶುಲ್ಕದಿಂದ ವಿನಾಯತಿ ಇರುತ್ತದೆ.<br>ಅನುದಾನಿತ ಪ್ರೌಢಶಾಲೆಗಳಲ್ಲಿನ ಇತರೆ ಸಾಮಾನ್ಯ ವರ್ಗದ ವಿದ್ಯಾರ್ಥಿನಿಯರಿಂದ ಮಾತ್ರ ಪರೀಕ್ಷಾ ಶುಲ್ಕ ಪಡೆಯಲಾಗುತ್ತಿದೆ. |

ಸಂಖ್ಯೆ: ಇಪಿ 210 ಎಸ್‌ಎಲ್‌ಬಿ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು